# ಕರ್ನಾಟಕ ವಿಧಾನ ಪರಿಷತ್ತು

**ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ** : 535
**ಸದಸ್ಯರ ಹೆಸರು** : ಡಾ: ಎಂ.ಜಿ. ಮುಳೆ (ವಿಧಾನಸಭಾ ಕ್ಷೇತ್ರ)
**ಉತ್ತರಿಸುವವರು** : ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವರು.
**ಉತ್ತರಿಸಬೇಕಾದ ದಿನಾಂಕ** : 30.01.2026.

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಬೀದರ್ ಜಿಲ್ಲೆಯ ಔರಾದ್ ಮತ್ತು ಬಸವಕಲ್ಯಾಣ ತಾಲ್ಲೂಕುಗಳಲ್ಲಿ ಮಕ್ಕಳಲ್ಲಿ ಅಪೌಷ್ಟಿಕತೆ ಪ್ರಮಾಣ ರಾಜ್ಯದ ಸರಾಸರಿಗಿಂತ ಹೆಚ್ಚಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ರಾಜ್ಯದ ಮಕ್ಕಳ ಸರಾಸರಿ ಅಪೌಷ್ಟಿಕತೆ ಪ್ರಮಾಣವು ಶೇ. 0.22 ರಷ್ಟಿದೆ. ಆದರೆ, ಪೋಷಣ್ ಟ್ರ್ಯಾಕರ್ ಅಪ್ಲೀಕೇಷನ ಅಂಕಿ ಅಂಶಗಳನ್ವಯ ಬೀದರ್ ಜಿಲ್ಲೆಯ ಔರಾದ್ ತಾಲ್ಲೂಕಿನಲ್ಲಿ ತೀವ್ರ ಅಪೌಷ್ಟಿಕ ಮಕ್ಕಳ ಪ್ರಮಾಣವು ಶೇ. 0.08 ಮತ್ತು ಬಸವಕಲ್ಯಾಣ ತಾಲ್ಲೂಕಿನಲ್ಲಿ ಶೇ. 0.11 ರಷ್ಟಿದ್ದು, ಈ ಎರಡೂ ತಾಲ್ಲೂಕುಗಳಲ್ಲಿ ಮಕ್ಕಳಲ್ಲಿನ ಅಪೌಷ್ಟಿಕತೆ ಪ್ರಮಾಣವು ರಾಜ್ಯದ ಒಟ್ಟಾರೆ ಸರಾಸರಿಗಿಂತ ಕಡಿಮೆ ಇರುವುದು ಕಂಡುಬಂದಿರುತ್ತದೆ. |
| ಆ) | ಕಳೆದ ಒಂದು ವರ್ಷದಲ್ಲಿ ಅಪೌಷ್ಟಿಕತೆ ನಿವಾರಣೆಗೆ ಈ ಜಿಲ್ಲೆಗೆ ಪೂರೈಕೆಯಾದ ಪೌಷ್ಟಿಕ ಆಹಾರದ ಮೊತ್ತವೆಷ್ಟು; | ಬೀದರ್ ಜಿಲ್ಲೆಯಲ್ಲಿ ಪೂರಕ ಪೌಷ್ಟಿಕ ಆಹಾರ ಕಾರ್ಯಕ್ರಮದಡಿ ಪೂರಕ ಪೌಷ್ಟಿಕ ಆಹಾರಕ್ಕಾಗಿ ಕಳೆದ ವರ್ಷದಲ್ಲಿ ಒಟ್ಟು ರೂ. 54.38 ಕೋಟಿಗಳನ್ನು ವೆಚ್ಚ ಮಾಡಲಾಗಿದೆ. |
| ಇ) | ಜಿಲ್ಲೆಯಲ್ಲಿ 'ಬಾಲ ಸಂಜೀವಿನಿ' ಮತ್ತು 'ಕ್ಷೀರ ಭಾಗ್ಯ' ಯೋಜನೆಯಡಿ ಎಷ್ಟು ಮಕ್ಕಳು ಪ್ರಯೋಜನ ಪಡೆಯುತ್ತಿದ್ದಾರೆ; | ಬಾಲ ಸಂಜೀವಿನಿ ಯೋಜನೆಯನ್ನು 2015-16 ನೇ ಸಾಲಿನಿಂದ ಸ್ಥಗಿತಗೊಳಿಸಲಾಗಿದೆ.<br><br>ಮುಂದುವರೆದು, ಬೀದರ್ ಜಿಲ್ಲೆಯಲ್ಲಿ ಕ್ಷೀರ ಭಾಗ್ಯ ಯೋಜನೆಯಡಿ 1,24,511 ಮಕ್ಕಳು ಪ್ರಯೋಜನ ಪಡೆಯುತ್ತಿದ್ದಾರೆ. |
| ಈ) | ಈ ಯೋಜನೆಗಳ ಪರಿಣಾಮಕಾರಿ ಅನುಷ್ಠಾನಕ್ಕೆ ಜಿಲ್ಲೆಯಲ್ಲಿರುವ ಕೊರತೆಗಳೇನು? | ಬಾಲ ಸಂಜೀವಿನಿ ಯೋಜನೆಯನ್ನು ಈಗಾಗಲೇ ಸ್ಥಗಿತಗೊಳಿಸಲಾಗಿದೆ.<br>ಕ್ಷೀರ ಭಾಗ್ಯ ಯೋಜನೆಯನ್ನು ಬೀದರ್ ಜಿಲ್ಲೆಯಲ್ಲಿ ಯಾವುದೇ ಅಡಚಣೆ ಇಲ್ಲದಂತೆ ಅನುಷ್ಠಾನಗೊಳಿಸಲಾಗುತ್ತಿದೆ. |

**ಸಂಖ್ಯೆ: ಮಮಇ 47 ಐಸಿಡಿ 2026**

**(ಲಕ್ಷ್ಮೀ ಆರ್. ಹೆಬ್ಬಾಳಕರ್)**
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ
ವಿಕಲಚೇತನರ ಮತ್ತು ಹಿರಿಯ ನಾಗರಿಕರ
ಸಬಲೀಕರಣ ಸಚಿವರು